# ಕನ್ನಡ ಸಾಹಿತ್ಯ ಪರಿಷತ್ತು

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦ ೦೧೮
ದೂರವಾಣಿ : ೦೮೦ ೨೬೬೨೩೫೮೧, ೨೬೬೧೨೯೯೧ ಫ್ಯಾಕ್ಸ್ : ೨೬೬೫೨೯೮೬೭
http://www.kasapa.in e-mail : kannadaparishattu@gmail.com


ಕ್ರಮಸಂಖ್ಯೆ : ಕಸಾಪ / **ಪ್ರಕಟಣೆ**/ ೨೦೨೨–೨೩ ದಿನಾಂಕ : ೧೨-೧೦-೨೦೨೨

ಇವರಿಗೆ

**ಸಂಪಾದಕರು / ಮುಖ್ಯ ವರದಿಗಾರರು**

..................................................ಬೆಂಗಳೂರು

ಪ್ರಕಟಣೆಯ ಕೃಪೆಗಾಗಿ

## ಜನವರಿ ೬,೭ ಹಾಗೂ ೮ ಶುಕ್ರವಾರ, ಶನಿವಾರ ಹಾಗೂ ಭಾನುವಾರ ಹಾವೇರಿಯಲ್ಲಿ ೮೬ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಘೋಷಣೆ

**ಬೆಂಗಳೂರು:** ಹಾವೇರಿಯಲ್ಲಿ ೮೬ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವು ೨೦೨೩ರ ಜನವರಿ ೬, ೭ ಮತ್ತು ೮ರಂದು ನಡೆಸುವ ಕುರಿತು ಬುಧವಾರ ವಿಧಾನಸೌಧದಲ್ಲಿ ನಡೆದ ಸಮ್ಮೇಳನ ಪೂರ್ವಭಾವಿ ಸಭೆಯಲ್ಲಿ ನಿರ್ಧರಿಸಲಾಗಿದೆ.

ಸಭೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಡೋಜ ಡಾ. ಮಹೇಶ ಜೋಶಿ, ಕಾರ್ಮಿಕ ಖಾತೆ ಮತ್ತು ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವ ಶ್ರೀ ಶಿವರಾಮ್ ಹೆಬ್ಬಾರ್, ಕನ್ನಡ ಮತ್ತು ಸಂಸ್ಕೃತಿ ಖಾತೆ ಸಚಿವರಾದ ಶ್ರೀ ವಿ ಸುನೀಲ್ ಕುಮಾರ್, ಶಾಸಕರಾದ ಶ್ರೀ ನೆಹರು ಓಲೇಕಾರ್, ಶ್ರೀ ಅರುಣಕುಮಾರ ಗುತ್ತೂರ, ಬಳ್ಳಾರಿ ವಿರೂಪಾಕ್ಷಪ್ಪ ರುದ್ರಪ್ಪ, ಹಾವೇರಿ ಜಿಲ್ಲಾಧಿಕಾರಿ ಶ್ರೀ ಸಂಜಯ ಶೆಟ್ಟಣ್ಣವರ, ಜಿ.ಪಂ. ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಶ್ರೀ ಮಹಮ್ಮದ್ ರೋಷನ್, ಹಾವೇರಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಶ್ರೀ ಲಿಂಗಯ್ಯ ಹಿರೇಮಠ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕಿ ಶ್ರೀಮತಿ ಕೆ.ಎಂ. ಜಾನಕಿ ಮುಂತಾದವರು ಭಾಗವಹಿಸಿದ್ದರು.

ಡಿಸೆಂಬರ್ ೨೩, ೨೪ ಹಾಗೂ ೨೫ ರಂದು ಹಾವೇರಿಯಲ್ಲಿ ೮೬ನೇಯ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ನಡೆಸಲು ಚರ್ಚಿಸಿದಾಗ, ಆ ದಿನಾಂಕಗಳಂದು ಪೂರ್ವನಿಯೋಜಿತ ಜನಸಂಕಲ್ಪ ಯಾತ್ರೆ ಇದ್ದು ಅದರಲ್ಲಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಭಾಗವಿಸಬೇಕಾಗಿದ್ದು, ದಕ್ಷಿಣ ಕನ್ನಡ ಜಿಲ್ಲೆಯ ಮೂಡುಬಿದ್ರೆಯ ವಿದ್ಯಾಗಿರಿಯಲ್ಲಿರುವ ಆಳ್ವಾಸ್ ಶಿಕ್ಷಣ ಸಂಸ್ಥೆಯ ಸಂಕೀರ್ಣದಲ್ಲಿ ವಿಶ್ವದಲ್ಲೇ ಪ್ರಥಮಬಾರಿಗೆ "ಅಂತರರಾಷ್ಟ್ರೀಯ ಸಾಂಸ್ಕೃತಿಕ ಸ್ಕೌಟ್ಸ್ ಮತ್ತು ಗೈಡ್ಸ್ ಜಾಂಬೋರಿ" ನಡೆಯುಲಿರುವುದರಿಂದ ಹಾಗೂ ದಾವಣಗೆರೆಯಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಅಧಿವೇಶನ ಮೂರು ದಿನ ನಡೆಯಲಿರುವ ಹಿನ್ನೆಲೆಯಲ್ಲಿ, ಹಾವೇರಿ ಸಮ್ಮೇಳನವನ್ನು ೨೦೨೩ರ ಜನವರಿ ೬, ೭, ೮ರ ಶುಕ್ರವಾರ, ಶನಿವಾರ ಮತ್ತು ರವಿವಾರದಂದು ನಡೆಸಲು ತೀರ್ಮಾನಿಸಲಾಗಿದೆ. ಈ ಕುರಿತು ಸಭೆಯಲ್ಲಿ ಮುಖ್ಯಮಂತ್ರಿ ಶ್ರೀ ಬಸವರಾಜ ಬೊಮ್ಮಾಯಿ ಅವರೊಂದಿಗೆ ದೂರವಾಣಿ ಮೂಲಕ ಸಂಪರ್ಕಿಸಿ ದಿನಾಂಕವನ್ನು ಖಚಿತಪಡಿಸಿಕೊಳ್ಳಲಾಗಿದೆ.

ಹಾವೇರಿಯಲ್ಲಿ ನಡೆಯಬೇಕಿದ್ದ ೮೬ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ನಾನಾ ಕಾರಣಗಳಿಂದ ಅನೇಕ ಬಾರಿ ಮುಂದೂಡಲಾಗಿದ್ದು, ಈ ದಿನಾಂಕಗಳು ನಿಶ್ಚಿತವಾಗಿದ್ದು, ಮತ್ತೆ ಬದಲಾವಣೆ ಇಲ್ಲವೆಂಬ ತೀರ್ಮಾನವನ್ನು ಸಭೆಯಲ್ಲಿ ಕೈಗೊಳ್ಳಲಾಯಿತು. ಯಾವುದೇ ಕಾರಣಕ್ಕೂ ಈಗ ನಿರ್ಧಾರವಾಗಿರುವ ದಿನಾಂಕಗಳನ್ನು ಬದಲಾಯಿಸಬಾರದು ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಸ್ಪಷ್ಟವಾದ ನಿಲುವನ್ನು ಸಭೆಯಲ್ಲಿ ತೋರಿಸಿದರು.

ಛಾಯಾಚಿತ್ರ: ೮೬ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವು ೨೦೨೩ರ ಜನವರಿ ೬, ೭ ಮತ್ತು ೮ರಂದು ನಡೆಸುವ ಕುರಿತು ಬುಧವಾರ ವಿಧಾನಸೌಧದಲ್ಲಿ ನಡೆದ ಸಮ್ಮೇಳನ ಪೂರ್ವಭಾವಿ ಸಭೆ.

ಶ್ರೀನಾಥ್ ಜೆ.

ಮಾಧ್ಯಮ ಸಲಹೆಗಾರರು

ಕನ್ನಡ ಸಾಹಿತ್ಯ ಪರಿಷತ್ತು ಬೆಂಗಳೂರು